ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT: ಗೃಹ ಸಿ.ಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 14/3/21

# ಸಿಡಿ ಲೇಡಿ ಪ್ರತ್ಯಕ್ಷ ರಕ್ಷಣೆಗೆ ಮೊರೆ

14/3/21

ವಿಶ್ವವಾಣಿ ಸುದ್ದಿಮನೆ ಬೆಂಗಳೂರು



ರಾಸಲೀಲೆ ಸಿಡಿ ಬಿಡುಗಡೆಯಾಗಿ 12 ದಿನಗಳ ನಂತರ ಸಂತ್ರಸ್ತ ಯುವತಿ ಸಾಮಾಜಿಕ ಜಾಲತಾಣದಲ್ಲಿ 34 ಸೆಕೆಂಡ್‌ಗಳ ವಿಡಿಯೊ ಹೇಳಿಕೆ ಬಿಡುಗಡೆ ಮಾಡಿದ್ದು, ತನಗೆ ರಕ್ಷಣೆ ನೀಡುವಂತೆ ಗೃಹ ಸಚಿವರಿಗೆ ಮನವಿ ಮಾಡಿಕೊಂಡಿದ್ದಾರೆ.

'ಕೆಲಸ ಕೊಡಿಸುವುದಾಗಿ ನಂಬಿಸಿ, ತನಗೆ ರಮೇಶ್ ಜಾರಕಿಹೊಳಿ ಮೋಸ ಮಾಡಿದ್ದು, ಈಗ ವಿಡಿಯೊ ಬಿಡುಗಡೆ ಮಾಡಿಸುವ ಮೂಲಕ ನನ್ನ ಮರ್ಯಾದೆ ಹಾಳು ಮಾಡಿದ್ದಾರೆ. ಇದರಿಂದ ನಾನು ಮತ್ತು ನನ್ನ ಕುಟುಂಬ ಆತ್ಮಹತ್ಯೆಗೆ ಯತ್ನಿಸಿದ್ದು, ನಮಗೆ ರಕ್ಷಣೆ ನೀಡಿ' ಎಂದು ಗೃಹ ಸಚಿವರಿಗೆ ಮನವಿ ಮಾಡಿಕೊಂಡಿದ್ದಾರೆ.

> 4

## ಪತ್ರಕರ್ತನ ಕೈವಾಡ?

ಖಾಸಗಿ ಸುದ್ದಿ ವಾಹಿನಿ ವರದಿಗಾರನೊಬ್ಬ ಸಿಡಿ ಪ್ರಕರಣದ ಪ್ರಮುಖ ರೂವಾರಿ ಎನ್ನಲಾಗಿದೆ. ಸದ್ಯ ಆತ ತಲೆಮರೆಸಿಕೊಂಡಿದ್ದು, ಆರೋಪಿಯ ಸ್ವಗ್ರಾಮ ಶಿರಾ ತಾಲೂಕಿನ ಭುವನಹಳ್ಳಿಯಲ್ಲಿ ಪೊಲೀಸರ ತಂಡ ದಾಳಿ ನಡೆಸಿ ಮನೆಯಲ್ಲಿದ್ದ ದಾಖಲೆ ವಶಕ್ಕೆ ಪಡೆದಿದೆ. ಆತ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆಪ್ತ ಎನ್ನಲಾಗಿದೆ.

ನಾವು ದೂರು ಕೊಟ್ಟ ಅರ್ಧ ಗಂಟೆಯ ನಂತರ ಯುವತಿಯ ವಿಡಿಯೊ ಹೇಳಿಕೆ ಬಿಡುಗಡೆಯಾಗಿದ್ದು, ಇದರ ಹಿಂದೆ ದೊಡ್ಡ ಷಡ್ಯಂತ್ರವಿದೆ. ಪ್ರಕರಣದ ಸಂಬಂಧ ಗೃಹಸಚಿವರೊಂದಿಗೆ ಚರ್ಚಿಸಿದ್ದೇನೆ. ಆದಷ್ಟು ಶೀಘ್ರ ಪ್ರಕರಣದ ತನಿಖೆ ನಡೆಸಿ ನ್ಯಾಯ ಕೊಡಿಸಿ ಎಂದು ಮನವಿ ಮಾಡಿದ್ದೇನೆ.

– ರಮೇಶ್ ಜಾರಕಿಹೊಳಿ
ಮಾಜಿ ಸಚಿವ

# ಸಿಡಿ ಲೇಡಿ ಪ್ರತ್ಯಕ್ಷ ರಕ್ಷಣೆಗೆ ವರಾತ

ಪ್ರ/14/3/21

← ಮೊದಲ ಪುಟದಿಂದ

'ನನಗೆ ಯಾವುದೇ ರಾಜಕೀಯ ನಾಯಕರ ಬೆಂಬಲವಿಲ್ಲ. ರಮೇಶ್ ಜಾರಕಿಹೊಳಿ ಅವರಿಂದಲೇ ಸಿಡಿ ರಿಲೀಸ್ ಆಗಿದೆ. ಈ ವಿಡಿಯೊದಿಂದ ನನ್ನ ಮಾನ ಹರಾಜಾಗಿದೆ. ಇದರಿಂದ ನನ್ನ ತಂದೆ, ತಾಯಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ನಾನೂ ಎರಡು ಮೂರು ಬಾರಿ ಆತ್ಮಹತ್ಯೆಗೆ ಯತ್ನಿಸಿದ್ದೇನೆ' ಎಂದು ಹೇಳಿದ್ದಾರೆ.

'ಯಾರು ಈ ವಿಡಿಯೊ ಬಿಡುಗಡೆ ಮಾಡಿದ್ದಾರೋ ನನಗೆ ಗೊತ್ತಿಲ್ಲ. ನಾನು ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಅವರಿಗೆ ಮನವಿ ಮಾಡುತ್ತೇನೆ. ನನಗೆ, ನನ್ನ ಕುಟುಂಬಸ್ಥರಿಗೆ ರಕ್ಷಣೆ ನೀಡುವಂತೆ ಮನವಿ ಮಾಡುತ್ತೇನೆ. ನನಗೆ ಯಾವುದೇ ರಾಜಕೀಯ ವ್ಯಕ್ತಿಗಳ ಬೆಂಬಲವಿಲ್ಲ. ಈ ಘಟನೆಯಿಂದ ನಾವು ಸಂಕಷ್ಟದಲ್ಲಿದ್ದೇವೆ' ಎಂದು ಹೇಳಿಕೊಂಡಿದ್ದಾರೆ.

**ಎಫ್‌ಐಆರ್ ದಾಖಲು:** ರಮೇಶ್ ಜಾರಕಿಹೊಳಿ ಆಪ್ತ ಹಾಗೂ ಮಾಜಿ ಶಾಸಕ ಎಂ.ವಿ.ನಾಗರಾಜ್ ಅವರು, ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಶನಿವಾರ ದೂರು ದಾಖಲಿಸಿದ್ದಾರೆ. ದೂರಿನನ್ವಯ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಪ್ರಕರಣದ ಸಮಗ್ರ ತನಿಖೆಗಾಗಿ ರಾಜ್ಯ ಸರಕಾರ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿದೆ. ಎಫ್‌ಐಆರ್ ದಾಖಲಿಸದೆ ತನಿಖೆ ನಡೆಸಿದರೆ ತನಿಖೆಗೆ ಹಿನ್ನಡೆ ಆಗುತ್ತದೆ ಎಂಬ ಅಂಶದ ಹಿನ್ನೆಲೆಯಲ್ಲಿ ಕೊನೆಗೂ ರಮೇಶ್ ಜಾರಕಿಹೊಳಿ ಅವರು ವಕೀಲರ ಸಲಹೆಯಂತೆ ದೂರು ಕೊಟ್ಟಿದ್ದಾರೆ. ಈಗ ಎಫ್‌ಐಆರ್ ದಾಖಲಾಗಿದ್ದು, ಪ್ರಕರಣವನ್ನು ಎಸ್‌ಐಟಿಗೆ ವರ್ಗಾವಣೆ ಮಾಡಲಾಗಿದೆ.